ಸರ್ಕಾರಿ ಶಾಲೆಗಳಿಗೆ ದಾನವಾಗಿ ನೀಡಿರುವ ಜಾಗ

1513(2037), ಶ್ರೀ ನಾರಾಯಣಗೌಡ (ಕೆ.ಆರ್.ಪೇಟೆ)

ಅ) ಕೆ.ಆರ್.ಪೇಟೆ ತಾಲ್ಲೂಕಿನಲ್ಲಿ ದಾನಿಗಳು ಸರ್ಕಾರಿ ಶಾಲೆಗಳಿಗೆ ದಾನವಾಗಿ ನೀಡಿದ ಭೂಮಿಯನ್ನು ಬೇರೆಯವರು ಅಕ್ರಮವಾಗಿ ಒತ್ತುವರಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಸದರಿ ಶಾಲೆಗಳ ಜಾಗವು ಒತ್ತುವರಿಯಾಗಿರುವುದನ್ನು ಪತ್ತೆ ಹಚ್ಚಿ, ಒತ್ತುವರಿ ತೆರವುಗೊಳಿಸಲು ಹಾಗೂ ಸದರಿ ಜಾಗವನ್ನು ಶಾಲೆಗಳ ಸುಪರ್ದಿಗೆ ವಹಿಸಿಕೊಡಲು ಸರ್ಕಾರ ಕ್ರಮ ಕೈಗೊಳ್ಳುವುದೇ;

ಇ) ಸದರಿ ಜಾಗವನ್ನು ಒತ್ತುವರಿ ಮಾಡಿದವರ ಮೇಲೆ ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಕಿಮ್ಮನೆ ರತ್ನಾಕರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ಇಂತಹ ಯಾವುದೇ ಪ್ರಕರಣಗಳು ಇಲಾಖೆಯ ಗಮನಕ್ಕೆ ಬಂದಿರುವುದಿಲ್ಲ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ಪದವಿ ಕಾಲೇಜಿಗೆ ಅನುದಾನ

1517(2053), ಶ್ರೀ ನರೇಂದ್ರ ಸ್ವಾಮಿ ಪಿ.ಎಂ.

ಅ) ಕಳೆದ 3 ವರ್ಷಗಳಲ್ಲಿ ಪ್ರಥಮ ದರ್ಜೆ ಕಾಲೇಜುಗಳ ಅಭಿವೃದ್ಧಿಗಾಗಿ ಎಷ್ಟು ಅನುದಾನವನ್ನು ವಿನಿಯೋಗಿಸಲಾಗಿದೆ (ತಾಲ್ಲೂಕುವಾರು ಮಾಹಿತಿ ನೀಡುವುದು);

ಆ) ಈ ಅಭಿವೃದ್ಧಿ ಕಾಮಗಾರಿಗಳು ಕಾಲಮಿತಿಯೊಳಗೆ ಪೂರ್ಣಗೊಂಡಿವೆಯೇ; ಬಾಕಿಯಿರುವ ಕಾಮಗಾರಿಗಳು ಯಾವುವು (ಜಿಲ್ಲಾವಾರು ಮಾಹಿತಿ ನೀಡುವುದು);

ಇ) ಮಳವಳ್ಳಿ, ಟೌನ್ ವ್ಯಾಪ್ತಿಯಲ್ಲಿರುವ ಪದವಿ ಕಾಲೇಜನ್ನು ಅಭಿವೃದ್ಧಿಪಡಿಸಲು ಮತ್ತು ಮೂಲಭೂತ ಸೌಕರ್ಯ ಕಲ್ಪಿಸಲು ಅನುದಾನದ ಅವಶ್ಯಕತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಈ) ಎಷ್ಟು ಕಾಲಮಿತಿಯಲ್ಲಿ ಅನುದಾನ ಒದಗಿಸಲಾಗುವುದು?

ಶ್ರೀ ಆರ್.ವಿ.ದೇಶಪಾಂಡೆ (ಮಾನ್ಯ ಉನ್ನತ ಶಿಕ್ಷಣ ಸಚಿವರು)

ಅ) ಅನುಬಂಧ–1ರಲ್ಲಿ ಲಗತ್ತಿಸಲಾಗಿದೆ.

ಆ) ಬಹುಪಾಲು ಕಾಮಗಾರಿಗಳು ಕಾಲಮಿತಿಯಲ್ಲಿ ಪೂರ್ಣಗೊಂಡಿದ್ದು, ಇನ್ನು ಕೆಲವು ಕಾಮಗಾರಿಗಳು ಕಾಲಮಿತಿಯೊಳಗೆ ಪೂರ್ಣಗೊಂಡಿರುವುದಿಲ್ಲ. ಬಾಕಿಯಿರುವ ಕಾಮಗಾರಿಗಳ ಜಿಲ್ಲಾವಾರು ಪಟ್ಟಿಯನ್ನು ಅನುಬಂಧ–2ರಲ್ಲಿ ಲಗತ್ತಿಸಲಾಗಿದೆ.

ಇ) ಬಂದಿದೆ.

₹ 25.00 ಲಕ್ಷ ಅಂದಾಜಿನ ಅಭಿವೃದ್ಧಿ ಕಾಮಗಾರಿಯ ಪ್ರಸ್ತಾವನೆ ಇದ್ದು, ಅಂದಾಜು ಪಟ್ಟಿ ಸಲ್ಲಿಸಿದ ನಂತರ ಅನುದಾನದ ಲಭ್ಯತೆಯನ್ನಾಧರಿಸಿ ಕ್ರಮವಹಿಸಲಾಗುವುದು.

ಈ) ಉದ್ಭವಿಸುವುದಿಲ್ಲ.